# ಗೇಟ್ ಪರೀಕ್ಷೆಯಲ್ಲಿ ಸಾಧನೆ



**ಹಳಿಯಾಳ:** ಪಟ್ಟಣದ ಕೆಎಲ್ಎಸ್ ಸಂಸ್ಥೆಯ ವಿಡಿಐಟಿ ಇಂನಿಯರಿಂಗ್ ಕಾಲೇಜಿನ ಅಂತಿಮ ವರ್ಷದ ಇಬ್ಬರು ವಿದ್ಯಾರ್ಥಿಗಳು ಗ್ರಾಜುಯೇಟ್ ಅಪ್ಟಿಟ್ಯೂಡ್ ಟೆಸ್ಟ್ ಇನ್ ಇಂಜಿನಿಯರಿಂಗ್ ಪರೀಕ್ಷೆಯಲ್ಲಿ ತೇರ್ಗಡೆಯಾಗಿ ಸಾಧನೆ ಮಾಡಿದ್ದಾರೆ.

ಕಂಪ್ಯೂಟರ್ ಸೈನ್ಸ್ ವಿಭಾಗದ ಕೊನೆಯ ವರ್ಷದ ವಿದ್ಯಾರ್ಥಿಗಳಾದ ಸಹನಾ ಮಲಿನ್ ಗಾಗೂ ಸುಕುಮಾರ್ ಚವ್ಹಾನ್ ಈ ಸಾಧನೆ ಗೈದ ಪ್ರತಿಭಾವಂತರಾಗಿದ್ದಾರೆ.

ದೇಶದ ಪ್ರತಿಷ್ಠಿತ ವಿದ್ಯಾಸಂಸ್ಥೆಗಳಾಧ ಐಐಟಿ, ಎನ್ಐಟಿಗಳಲ್ಲಿ ಸ್ನಾತಕೋತ್ತರ ಪ್ರವೇಶಾತಿಗೆ ಮತ್ತು ಸಾರ್ವಜನಿಕ ವಲಯದ ಉದ್ಯಮಗಳಲ್ಲಿ ನೇರ ನೇಮಕಾತಿಗಳಲ್ಲಿ ಗೇಟ್ ಅಂಕವನ್ನು ಪರಿಗಣಿಸಲಾಗುತ್ತದೆ. ರಾಷ್ಟ್ರಮಟ್ಟದ ಪ್ರತಿಷ್ಠಿತ ಪರೀಕ್ಷೆಯಲ್ಲಿ ತೇರ್ಗಡೆಯಾದ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಸಾಧನೆಗೆ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ವಿ.ಎ.ಕುಲರ್ಣಿಯವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಹಾಗೂ ಕಂಪ್ಯೂಟರ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ.ವೆಂಕಟೇಶ್ ಶಂಕರ್ ಅವರನ್ನು ಹಾಗೂ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಶುಭ ಹಾರೈಸಿ ಅಭಿನಂದಿಸಿದ್ದಾರೆ.

# ಕೆಎಲ್ಎಸ್ ವಿಡಿ ಐಟಿ ವಿದ್ಯಾರ್ಥಿಗಳ ಸಾಧನೆ



ಸಹನಾ



ಸುಕುಮಾರ

**ಹಳಿಯಾಳ:** ಗ್ರಾಜುಯೇಟ್ ಆಪ್ಟಿಟ್ಯೂಡ್ ಟೆಸ್ಟ್ ಇನ್ ಇಂಜಿನಿಯರಿಂಗ್ (ಗೇಟ್ ) 2026ನೇ ಸಾಲಿನ ರಾಷ್ಟ್ರ ಮಟ್ಟದ ಪರೀಕ್ಷೆಯಲ್ಲಿ ಪಟ್ಟಣದ ಕೆಎಲ್ಎಸ್ ವಿಡಿ ಐಟಿ ಮಹಾವಿದ್ಯಾಲಯದ ಇಬ್ಬರು ವಿದ್ಯಾರ್ಥಿಗಳು ತೇರ್ಗಡೆ ಹೊಂದುವ ಮೂಲಕ ಸಾಧನೆ ಮಾಡಿದ್ದಾರೆ ಎಂದು ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ತಿಳಿಸಿದ್ದಾರೆ. ಕಂಪ್ಯೂಟರ್ ಸೈನ್ಸ್ ವಿಭಾಗದ ಕೊನೆಯ ವರ್ಷದ ವಿದ್ಯಾರ್ಥಿಗಳಾದ ಸಹನಾ ಮಲಿನ್ ಹಾಗೂ ಸುಕುಮಾರ ಚವಾಣ ಈ ಸಾಧನೆಗೈದಿದ್ದಾರೆ.

# ಗೇಟ್ ಪರೀಕ್ಷೆ: ವಿದ್ಯಾರ್ಥಿಗಳ ಸಾಧನೆ





**ಹಳಿಯಾಳ:** ಗ್ರಾಜುಯೇಟ್ ಆಪ್ಟಿಟ್ಯೂಡ್ ಟೆಸ್ಟ್ ಇನ್ ಇಂಜಿನಿಯರಿಂಗ್ (ಗೇಟ್) 2026 ನೇ ಸಾಲಿನ ರಾಷ್ಟ್ರ ಮಟ್ಟದ ಪರೀಕ್ಷೆಯಲ್ಲಿ ಪಟ್ಟಣದ ಕೆಎಲ್‌ಎಸ್ ವಿಡಿಐಟಿಯ ಇಬ್ಬರು ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ.

ಕಂಪ್ಯೂಟರ್ ಸೈನ್ಸ್ ವಿಭಾಗದ ಕೊನೆಯ ವರ್ಷದ ವಿದ್ಯಾರ್ಥಿಗಳಾದ ಸಹನಾ ಮಲಿನ್ ಹಾಗೂ ಸುಕುಮಾರ್ ಚವಾಣ ಈ ಸಾಧನೆಗೈದಿದ್ದಾರೆ.

ಪ್ರತಿಷ್ಠಿತ ವಿದ್ಯಾ ಸಂಸ್ಥೆಗಳಾದ ಐಐಟಿ, ಎನಐಟಿ ಗಳಲ್ಲಿ ಸ್ನಾತಕೋತ್ತರ ಪ್ರವೇಶಾತಿಗೆ ಮತ್ತು ಸಾರ್ವಜನಿಕ ವಲಯದ ಉದ್ಯಮಗಳಲ್ಲಿ ನೇರ ನೇಮಕಾತಿಗಳಲ್ಲಿ ಗೇಟ್ ಅಂಕವನ್ನು ಪರಿಗಣಿಸಲಾಗುತ್ತದೆ. ಮಹಾವಿದ್ಯಾಲಯದ ವಿದ್ಯಾರ್ಥಿಗಳು ರಾಷ್ಟ್ರ ಮಟ್ಟದ ಪ್ರತಿಷ್ಠಿತ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವುದು ಸಂತಸ ತಂದಿದೆ ಎಂದು ಆಡಳಿತ ಮಂಡಳಿ ಅಧ್ಯಕ್ಷ ಪ್ರಶಾಂತ ಕುಲಕರ್ಣಿ ಮತ್ತು ಪ್ರಾಚಾರ್ಯ ಡಾ. ವಿ.ಎ ಕುಲಕರ್ಣಿ ಹೇಳಿದ್ದಾರೆ.

ಕಂಪ್ಯೂಟರ್ ಸೈನ್ಸ್ ವಿಭಾಗ ಮುಖ್ಯಸ್ಥ ಡಾ. ವೆಂಕಟೇಶ್ ಶಂಕರ್ ಹಾಗೂ ಎಲ್ಲಾ ಬೋಧಕ ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.